## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಗೀತಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೇಬೂರು ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ಸ್ವೀಕೃತಿಸಂಖ್ಯೆ:ಅ.ಸ.ಪ.ಸಂ/ಕಂಪ್ಲೇಂಟ್/ಉಪಲೋಕ್/ಎಂವೈಎಸ್/2849/2017/ಡಿಆರ್‌ಇ-4, ದಿನಾಂಕ:05.09.2019

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: ದಿನಾಂಕ:26.08.2019 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಹೆಚ್.ಪಿ.ಶೇಷಣ್ಣ, ಹೆಜ್ಜಿಗೆ ಗ್ರಾಮ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ರವರು ಶ್ರೀಮತಿ ಗೀತಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೇಬೂರು ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರಡಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

ದೂರಿನ ಸಂಕ್ಷಿಪ್ತ ವಿವರಣೆ:- ಮೈಸೂರು ಜಿಲ್ಲೆ ನಂಜನಗೂಡು ಕೈಗಾರಿಕಾ ಪ್ರದೇಶದಲ್ಲಿರುವ ಜುಬಿಲಿಯೆಂಟ್ ಜೆನರಿಕ್ ಪ್ರೈಲಿ, ಕೈಗಾರಿಕೆಯಿಂದ ಹೊರಹೊಮ್ಮುವ ವಿಷಕಾರಿ ತ್ಯಾಜ್ಯ ನೀರನ್ನು ಕಬಿನಿ ನದಿಗೆ ಹಾಗೂ ವಿಷಕಾರಿ ಅನಿಲವನ್ನು ಗಾಳಿಗೆ ಸೇರುತ್ತಿರುವುದರಿಂದ ನದಿ ನೀರು ಮಾಲಿನ್ಯಗೊಂಡು ನೀರನ್ನು ಕುಡಿದ ಸಾರ್ವಜನಿಕರಿಗೆ ಮತ್ತು ಜಾನುವಾರುಗಳಿಗೆ ಅನಾರೋಗ್ಯ ಉಂಟಾಗಿರುತ್ತದೆ ಮತ್ತು ಮೀನುಗಳು ಸಾಯುತ್ತಿವೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಎದುರುದಾರರಗೆ ಹಲವಾರು ಬಾರಿ ತಿಳಿಸಿದರೂ ಸಹ ಯವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಆಪಾದಿಸಿ ಎದುರುದಾರರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲು ಕೋರಿರುತ್ತಾರೆ.

ಯಾವುದೇ ಗ್ರಾಮ ಪಂಚಾಯತಿಯ ಪರಿಮಿತಿಯೊಳಗೆ ಯಾವುದೇ ವ್ಯಾಪಾರದ ಅಥವಾ ಯಾವುದೇ ತಯಾರಿಕೆಯ ಉದ್ದೇಶಕ್ಕಾಗಿ ಬಳಸುವ ಯಾವುದೇ ಕಾಮಗಾರಿಯಲ್ಲಿ ಅಥವಾ ಕಟ್ಟಡದಲ್ಲಿ ಅಳವಡಿಸಿರುವ ಅಥವಾ ಅಳವಡಿಸಿಕೊಳ್ಳುವ ಪ್ರತಿಯೊಂದು ಕುಲುಮೆಯನ್ನು, ಅದರಲ್ಲಿ ಉಗಿಯಂತ್ರವನ್ನು ಬಳಸಿರಲಿ ಅಥವಾ ಇಲ್ಲದಿರಲಿ ಅಥವಾ ಅಳವಡಿಸಿರಲಿ ಅಥವಾ ಇಲ್ಲದಿರಲಿ, ಎಲ್ಲಾ ಸಂದರ್ಭಗಳಲ್ಲಿಯೂ ಅಂಥ ಕುಲುಮೆಯಿಂದ ಹೊರಬರುವ ಹೊಗೆಯನ್ನು ಸಾಧ್ಯವಾದಷ್ಟು ಮಟ್ಟಿಗೆ ಉಗಿಯಂತ್ರವು ನಾಶ ಮಾಡುವ ಹಾಗೆ ಅಥವಾ ಸುಡುವ ಅಥವಾ ಕಡಿಮೆ ಮಾಡುವ ಹಾಗೆ ಅದನ್ನು ನಿರ್ಮಿಸತಕ್ಕದ್ದೆಂದು, ಅದಕ್ಕೆ ಪೂರಕವಾಗಿ ಬೇರೇನನ್ನಾದರೂ ನಿರ್ಮಿಸತಕ್ಕದ್ದೆಂದು ಅಥವಾ ಅದನ್ನು ಮಾರ್ಪಡಿಸತಕ್ಕದ್ದೆಂದು ಸಾರ್ವಜನಿಕ ನೋಟೀಸು ನೀಡುವ ಮೂಲಕ ಗ್ರಮ ಪಂಚಾಯತಿಯು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಕಲಂ 109 ರಲ್ಲಿ ನಿರ್ದೇಶಿಸಬಹುದಾಗಿದೆ.

ಮುಂದುವರೆದು, ಹೊಲಸು ನೀರಿನಿಂದಾಗುವ ಉಪದ್ರವವನ್ನು ತಡೆಯಲು ಅದೇ ಕಾಯಿದೆಯ ಕಲಂ 87 ರಲ್ಲಿ ಪಂಚಾಯತ್ ಕಾರ್ಯದರ್ಶಿ/ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಗೆ ಅಧಿಕಾರವಿದೆ. ಯಾವುದೇ ಕೆರೆ, ಕುಂಟೆ, ಗುಂಡಿ, ಕೊಳ, ಬಾವಿ, ರಂಧ್ರ ಅಥವಾ ನಿರುಪಯುಕ್ತ ಅಥವಾ ನಿಂತ ನೀರು ಅಥವಾ ಹೊಲಸು ನೀರಿನ ಯಾವುದೇ ಕಾಲುವೆ ಅಥವಾ ಜಲಪಾತ್ರ ಅಥವಾ ಇತರ ಅಸಹ್ಯಕರ ಅಥವಾ ಹಾನಿಕಾರ ವಸ್ತುವು ಅದು ಯಾವುದೇ ಖಾಸಗಿ ಆವರಣದೊಳಗೆ ಇರಲಿ ಅಥವಾ ಬೇರೆಲ್ಲೆ ಇರಲಿ ಅದು ನಿವಾಸಿಗ ಆರೋಗ್ಯಕ್ಕೆ ಅಪಾಯಕಾರಿಯಾಗುವ ಅಥವಾ ನೆರೆಹೊರೆಯವರಿಗೆ ಅಸಹ್ಯಕರವಾಗುವ ಸಂಬವವಿದೆಯೆಂದು ಕಾರ್ಯದರ್ಶಿಗೆ ಕಂಡುಬಂದರೆ ಕಾರ್ಯದರ್ಶಿಯು ಅದರ ಮಾಲಿಕನಿಗೆ ಲಿಖಿತ ನೋಟೀಸಿನ ಮೂಲಕ ಅದನ್ನು ಸ್ವಚ್ಛಗೊಳಿಸಲು, ಮುಚ್ಚಿಹಾಕಲು ಪರಿದುಹೋಗುವಂತೆ ಮಾಡಲು ಅಥವಾ ಅದನ್ನು ತೆಗೆದುಹಾಕಲು ಅಥವಾ ಆ ಉಪದ್ರವವನ್ನು ತಡೆಯಲು ಅಥವಾ ತೆಗೆದುಹಾಕಲು ಅವಶ್ಯವಿರತಕ್ಕಂಥ ಕ್ರಮಗಳನ್ನು ಕೈಗೊಳ್ಳಲು ಸದರಿ ಕಲಂ ಅಡಿ

ಅಗತ್ಯಪಡಿಸಬಹುದು. ಆದರೆ, ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಕಲಂ 87 ರಲ್ಲಾಗಲಿ ಅಥವಾ 109 ರಲ್ಲಾಗಲೀ ನೀಡಿರುವ ಅಧಿಕಾರವನ್ನು ಚಲಾಯಿಸದೇ ಕಾರ್ಖಾನೆಯಿಂದ ಹೊರಸೂಸುತ್ತಿರುವ ನೀರನ್ನು ಕಪಿಲ ನದಿಗೆ ಬಿಡದೇ ಕಾರ್ಖಾನೆ ವ್ಯಾಪ್ತಿಯಲ್ಲಿಯೇ ಪರ್ಯಾಯ ಕ್ರಮವನ್ನು ವಹಿಸಲು ಸೂಚಿಸಿ ಕಾರ್ಖಾನೆಯ ವ್ಯವಸ್ಥಾಪಕರಿಗೆ ದೇಬೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ದಿನಾಂಕ: 24.05.2017 ರ ನೋಟೀಸನ್ನು ಮಾತ್ರ ನೀಡಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ ಶ್ರೀಮತಿ ಗೀತಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೇಬೂರು ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ಉಪಲೋಕಾಯುಕ್ತರಿಗೆ ವಹಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/379/ಗ್ರಾಪಂಕಾ/2019**

**ಬೆಂಗಳೂರು, ದಿನಾಂಕ: 21-10-2019.**

ಪರಿಶೀಲಿಸಲಾಗಿ, ಶ್ರೀಮತಿ ಗೀತಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೇಬೂರು ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Narayan Dy. 21/10/19

(ಡಿ.ಜಿ.ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)(ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 59).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀಮತಿ ಗೀತಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೇಬೂರು ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.